# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
## ಕಿರಿಯ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 164, ವಿದ್ಯಾಪೀಠ ಬೆಂಗಳೂರು.

ಸಂಖ್ಯೆ: ಸ.ಅ/ವಾ–164/ಪಿಆರ್/2020–21

ದಿನಾಂಕ: 08–01–2021

## ಜನವರಿ ಮಾಹೆಯ 1ನೇ ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020–21, ದಿನಾಂಕ: 21–09–2020ರ ಆದೇಶದಂತೆ ದಿನಾಂಕ: 17–10–2020 ರಂದು ವಾರ್ಡ್ ಸಂಖ್ಯೆ: 164, ವಿದ್ಯಾಪೀಠದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಸ್ಥಳ : ಬಿಬಿಎಂಪಿ ವಿವಿಧೋದ್ದೇಶ ಕಟ್ಟಡ, ಶ್ರೀಕಂಠೇಶ್ವರ ಪಾರ್ಕ್ ಹತ್ತಿರ

ಸಮಯ : ಸಂಜೆ 4.00 ಗಂಟೆಗೆ ದಿನಾಂಕ: 06–01–2021

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಆರ್. ವಿಜಯ್‌ಕುಮಾರ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2 | ಶ್ರೀ ನಂದೀಶ್ .ಎಸ್ | ಕಿರಿಯ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ 164, ವಿದ್ಯಾಪೀಠ |
| 3 | ಡಾ|| ಜಾನ್ಸಿ .ಎಂ | ವೈದ್ಯಾಧಿಕಾರಿ (ಸಿ.ಟಿ ಬೆಡ್ ಆರೋಗ್ಯ ಕೇಂದ್ರ) |
| 4 | ಶ್ರೀ ಸುನಿಲ್ | ಹಿರಿಯ ಆರೋಗ್ಯ ಪರಿವೀಕ್ಷಕರು (ಬಸವನಗುಡಿ ವಲಯ) |
| 5 | ಶ್ರೀ ಹರೀಶ್ | ಕಂದಾಯ ಪರಿವೀಕ್ಷಕರು, ವಾರ್ಡ್ ನಂ. 164 |
| 6 | ಶ್ರೀಮತಿ ಲಕ್ಷ್ಮಿ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ. 164 |
| 7 | ಶ್ರೀ ಧವಳೇಶ್ | ಸಹಾಯಕ ಅಭಿಯಂತರರು (ಬೆಸ್ಕಾಂ) |
| 8 | ಸ್ವಾಮಿ ಗೌಡ | ವಾರ್ಡ್‌ನ ಹಿರಿಯ ನಾಗರೀಕರು |
| 9 | ಸಾಯಿಕುಮಾರ್ | ವಾರ್ಡ್‌ನ ಹಿರಿಯ ನಾಗರೀಕರು |
| | | |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ಆರ್. ವಿಜಯ್‌ಕುಮಾರ್ ರವರು ಜನವರಿ–2021ರ ಸಭೆಯನ್ನು ಎಲ್ಲರಿಗೂ ಹೊಸ ವರ್ಷದ ಶುಭಾಷಯಗಳನ್ನು ಕೋರುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

1. ಸಭೆಗೆ ಹಾಜರಿದ್ದ ಸದಸ್ಯರಿಗೆ ಸ್ವಾಗತವನ್ನು ಕೋರಿ ವಾರ್ಡ್ ಇಂಜಿನಿಯರ್ ರವರಿಂದ ವಾರ್ಡ್ ಕೆಲಸ ಕಾರ್ಯಗಳನ್ನು ಪರಿಚಯಿಸಿದ್ದು, ಮುಂದುವರೆದಂತೆ ಮೇಜರ್ ರಸ್ತೆಯಲ್ಲಿ ನಡೆಸುತ್ತಿರುವ ಡಿಸಂಬರ್–2020ರ ಮಾಹೆಯಲ್ಲಿ ಕೈಗೊಂಡ ಕಾಮಗಾರಿಗಳ ಬಗ್ಗೆ ಮಾಹಿತಿಯನ್ನು ವಾರ್ಡ್ ಅಭಿಯಂತರರು ಸಭೆಯಲ್ಲಿ ತಿಳಿಸಿರುತ್ತಾರೆ.

(ಮು.ತಿ.ನೋ)

2. ರಸ್ತೆ ಗುಂಡಿಗಳ ಮುಚ್ಚುವ ಕಾಮಗಾರಿ ವಿವರಗಳ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಮಾಹಿತಿಯನ್ನು ಸಭೆಯಲ್ಲಿ ತಿಳಿಸಿರುತ್ತಾರೆ. ಮುಂದುವರೆದಂತೆ ಪಿ.ಓ.ಡಬ್ಲ್ಯೂ ವರ್ಕ್ಸ್ 2020-21ನೇ ಸಾಲಿನ ಕಾಮಗಾರಿಗಳಾದ Emergency Works & Ward Maintenance ಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಿದ್ದು, ವಾರ್ಡ್ ಅಭಿಯಂತರರು ಸಭೆಯಲ್ಲಿ ಮಂಡಿಸಿರುತ್ತಾರೆ.

3. 02-01-2021ರಂದು ನಡೆದಿರುವ ಕೋವಿಡ್-19ಗೆ ಡ್ರೈರನ್ ಲಸಿಕೆ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ವಾರ್ಡ್ ವ್ಯಾಪ್ತಿಯಲ್ಲಿರುವ ವಿದ್ಯಾಪೀಠ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದ ಸ್ವಚ್ಚತೆ ಕಾರ್ಯಕ್ರಮವನ್ನು ಮಾಡಿರುವುದನ್ನು ವಾರ್ಡ್ ಅಭಿಯಂತರರು ಸಭೆಯಲ್ಲಿ ತಿಳಿಸಿರುತ್ತಾರೆ.

4. ವಾರ್ಡ್‌ನಲ್ಲಿ ದಿನಾಂಕ: 02-01-2021 ರಂದು ಕೋವಿಡ್-19 ಲಸಿಕೆ ಡ್ರೈರನ್ ಉದ್ಘಾಟನಾ ಕಾರ್ಯಕ್ರಮವನ್ನು (ಡ್ರೈರನ್) ನಡೆಸಲಾಯಿತು. ಈ ಕಾರ್ಯಕ್ರಮಕ್ಕೆ ಮಾನ್ಯ ಶಾಸಕರು, ಬಸವನಗುಡಿ ವಿಧಾನ ಸಭಾ ಕ್ಷೇತ್ರ ರವರು, ಮಾನ್ಯ ಲೋಕಸಭಾ ಸದಸ್ಯರು (ಬೆಂಗಳೂರು-ದಕ್ಷಿಣ) ರವರು, ವಲಯ ಆಯುಕ್ತರು ಕೋವಿಡ್, ವಿಶೇಷ ಆಯುಕ್ತರು (ಆರೋಗ್ಯ), ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ಆರ್. ವಿಜಯ್‌ಕುಮಾರ್ ರವರು, ಕಾರ್ಯಪಾಲಕ ಅಭಿಯಂತರರು, ಬಸವನಗುಡಿ ವಿಭಾಗ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಗಿರಿನಗರ ಉಪವಿಭಾಗ ರವರು ಹಾಗೂ ಕಿರಿಯ ಅಭಿಯಂತರರು, ವಾರ್ಡ್-164 ರವರು ಹಾಜರಿರುತ್ತಾರೆ ಎಂದು ಸಭೆಯಲ್ಲಿ ವಾರ್ಡ್ ಅಭಿಯಂತರರು ಸಭೆಯಲ್ಲಿ ತಿಳಿಸಿರುತ್ತಾರೆ. ಸದರಿ ಕಾರ್ಯಕ್ರಮವು ಯಾಶಸ್ವಿಯಾಗಿ ನಡೆಸಲಾಗಿದ್ದು, ಎಲ್ಲಾ ಮಾಧ್ಯಮ ಪ್ರತಿನಿಧಿಗಳು ಹಾಜರಾಗಿ ಕಾರ್ಯಕ್ರಮವನ್ನು ದೃಷ್ಟಿ ಮಾಧ್ಯಕ್ಕೆ ಪ್ರಚುರ ಪಡಿಸಿರುತ್ತಾರೆ ಎಂದು ಸಭೆಯಲ್ಲಿ ತಿಳಿಸಿರುತ್ತಾರೆ.

5. ಕೋವಿಡ್-19 ಸಂಬಂಧಿಸಿದಂತೆ ವಾರ್ಡ್ ವ್ಯಾಪ್ತಿಯಲ್ಲಿ ಸುಮಾರು 1290 ಆರ್.ಟಿ.ಪಿ.ಸಿ.ಆರ್ ಟೆಸ್ಟ್‌ಗಳನ್ನು ನಡೆಸಲಾಗಿದೆಯೆಂದು ಶ್ರೀ ಸುನಿಲ್, ಹಿರಿಯ ಆರೋಗ್ಯ ಪರಿವೀಕ್ಷಕರು ರವರು ತಿಳಿಸಿರುತ್ತಾರೆ.

6. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ನಿಯಂತ್ರಣದಲ್ಲಿರುವುದರಿಂದ ಕೋವಿಡ್ ಲಸಿಕೆ ನೀಡುವ ಎಲ್ಲಾ ಮುಂಜಾಗ್ರತಾ ಕ್ರಮಗಳನ್ನು ವಾರ್ಡ್ ವ್ಯಾಪ್ತಿಯಲ್ಲಿ ಕ್ರಮ ಕೈಗೊಳ್ಳಲು ಸಭೆಯಲ್ಲಿ ಚರ್ಚಿಸಲಾಯಿತು.

7. ಕೋವಿಡ್-19 ನಿವಾರಣೆಗಾಗಿ ಲಸಿಕೆ ನೀಡುವ ಆದ್ಯತೆಗಾಗಿ ಕೋವಿಡ್‌ನಿರತ ವೈದ್ಯರು ಮತ್ತು ಅರೆ ವೈದ್ಯರುಗಳು ಸಿಬ್ಬಂದಿ ವರ್ಗದವರನ್ನು ಗುರುತಿಸಿ ಲಸಿಕೆ ನೀಡಲು ಆರೋಗ್ಯ ವಿಭಾಗದವರು ಎಲ್ಲಾ ಸಿದ್ಧತೆ ಕ್ರಮಗಳನ್ನು ಕ್ರಮಕೈಗೊಳ್ಳಲು ಸಭೆಯಲ್ಲಿ ತಿಳಿಸರುತ್ತಾರೆ.

8. ವಾರ್ಡ್ ವ್ಯಾಪ್ತಿಯಲ್ಲಿ ಬಜೆಟ್ ಕಾಮಗಾರಿಗಳಿಗಾಗಿ 2020-21 ಮತ್ತು 2021-22ನೇ ಸಾಲಿನ ಬಿಡ್ಸ್‌ನ್ನು ತಯಾರಿಸಲು ಮತ್ತು ನಿರ್ವಹಿಸಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಂಡಿದ್ದು, ವಲ್ಲಭ ಸಾಫ್ಟ್‌ವೇರ್ ಹೊಸ ಐ.ಎಫ್.ಎಂ.ಎಸ್ ಸಾಫ್ಟ್‌ವೇರ್‌ನಿಂದ ಮತ್ತು ಅದರ ತಾಂತ್ರಿಕ ತೊಂದರೆಯಿಂದ ಪೂರ್ಣಗೊಳಿಸಲು ಸ್ವಲ್ಪ ತಡವಾಗಿರುತ್ತದೆ ಎಂದು ವಾರ್ಡ್ ಅಭಿಯಂತರರು ಸಭೆಯಲ್ಲಿ ತಿಳಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಕಿರಿಯ ಅಭಿಯಂತರರು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾನಿ) ರವರ ಮಾಹಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಪ್ರತಿ.